ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ: 23ನೇ ಜುಲೈ, 2019

ಸರಣಿ ಬ್ಯಾರೇಜ್ ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಾಚಾರ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)-

102 (713) ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕøತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೀದರ್ ಜಿಲ್ಲಾ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿ ಗೇಟು ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) 04 ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣವೆಷ್ಟು ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ ;

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ;

(ಈ) ನೂರಾರು ಕೋಟಿ ರೂಪಾಯಿ ವೆಚ್ಚಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಉಂಟಾಗಲು ಕಾರಣವೇನು; ಇದಕ್ಕೆ ಕಾರಣರಾದವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ; (ಸ್ಪಷ್ಟ ಮಾಹಿತಿ ನೀಡುವುದು)

(ಉ) ಕೂಡಲೇ 4 ಬ್ಯಾರೇಜ್‌ಗಳ ಗೇಟುಗಳನ್ನು ಸರಿಪಡಿಸಿ ರೈತರಿಗೆ ನೀರು ಸರಬರಾಜು ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)